ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 06 ಡಿವಿಪಿ (1) 2019

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 560 001.
ದಿನಾಂಕ: 26-04-2019.

## ಸುತ್ತೋಲೆ

ವಿಷಯ: ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ (ರಿಟ್ ಅಪೀಲು ಸಂಖ್ಯೆ: 2476/2015 ರಲ್ಲಿ) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ ವೇತನವನ್ನು ಮರುನಿಗದಿಪಡಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 60 ಶಾಸನ 2013 ದಿ: 12.02.2014
2. ಈ ಕಛೇರಿ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 10.04.2019

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ 02 ರ ಸುತ್ತೋಲೆಯನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ. ಸರ್ಕಾರವು ಉಲ್ಲೇಖ 01 ರ ಅಧಿಸೂಚನೆಯನ್ವಯ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014 ಅನ್ನು ದಿನಾಂಕ: 01.06.1995 ರಿಂದ ಅನ್ವಯವಾಗುವಂತೆ ಜಾರಿಗೊಳಿಸಿದ್ದು, ಸದರಿ ಅಧಿನಿಯಮದಂತೆ ಖಾಸಗಿ ಅನುದಾನಿತ ಸಂಸ್ಥೆಗಳ **ಅನುದಾನಿತ ಸಿಬ್ಬಂದಿಗಳು ಅನುದಾನರಹಿತ ಅವಧಿಯಲ್ಲಿ ಸಲ್ಲಿಸಿದ ಸೇವೆಯನ್ನು ವೇತನ, ರಜೆ, ನಿವೃತ್ತಿವೇತನ ಮತ್ತು ಇತರ ಯಾವುದೇ ಸೇವಾ ಸೌಲಭ್ಯಗಳಿಗಾಗಿ ಪರಿಗಣಿಸತಕ್ಕದ್ದಲ್ಲವೆಂದು ತಿಳಿಸಲಾಗಿದೆ.**

ಸದರಿ ಅಧಿನಿಯಮವನ್ನು ಪ್ರಶ್ನಿಸಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ಸಲ್ಲಿಸಿದ ರಿಟ್ ಅರ್ಜಿ ಸಂಖ್ಯೆ: 21216/2014 ರಲ್ಲಿ ಮಾನ್ಯ ನ್ಯಾಯಾಲಯವು ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ಅನ್ನು ಅಸಂವಿಧಾನಿಕವೆಂದು ವಜಾಗೊಳಿಸಿರುತ್ತದೆ.

ಆದರೆ ನ್ಯಾಯಾಲಯದ ಈ ಆದೇಶವನ್ನು ಪ್ರಶ್ನಿಸಿ ಕರ್ನಾಟಕ ರಾಜ್ಯ ಸರ್ಕಾರವು ರಿಟ್ ಅಪೀಲು ಸಂಖ್ಯೆ: 2476/2015 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ (ದ್ವಿಸದ್ಯ ಪೀಠ) ಮೇಲ್ಮನವಿ ಸಲ್ಲಿಸಿದ್ದು, ಈ ರಿಟ್ ಅಪೀಲಿನ ಮೇಲೆ ಮಾನ್ಯ ನ್ಯಾಯಾಲಯದ ಮಧ್ಯಂತರ ಆದೇಶದಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದೆ.

The state shall **go on paying their current emoluments in terms of the re fixation**, subject, however, to the result of the writ appeals. However, they are restrained from initiating any recovery proceedings for recovery of the arrears of pay. So far as the retired employees are concerned learned Advocate General submits that the pension they are getting shall be continued to be paid to them. He submits that in some cases the pensions are based on the old scales and in some cases after re-fixation. The State shall be paying the pension as are paid to those retired employees as of today.

ಮಾನ್ಯ ನ್ಯಾಯಾಲಯದ ಮೇಲ್ಕಂಡ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಹಾಗೂ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014 ರನ್ವಯ ಎಲ್ಲಾ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಅವರು ವೇತನಾನುದಾನಕ್ಕೊಳಪಟ್ಟ ದಿನಾಂಕದಿಂದ ಅನುದಾನಿತ ಸೇವೆಯನ್ನು ಮಾತ್ರ ಪರಿಗಣಿಸಿ ವೇತನವನ್ನು ಮರುನಿಗದಿಪಡಿಸಲು ಎಲ್ಲಾ ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರಿಗೆ ಈ ಮೂಲಕ ಸೂಚಿಸಲಾಗಿದೆ.

ಎಲ್ಲಾ ಅನುದಾನಿತ ಸಿಬ್ಬಂದಿಗಳ ವೇತನವನ್ನು ಮರುನಿಗಪಡಿಸಿ, ಸೇವಾಪುಸ್ತಕಗಳ ಉದ್ಧೃತ ಭಾಗದೊಂದಿಗೆ 10 ದಿನಗಳೊಳಗಾಗಿ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ವರದಿ ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮವಹಿಸಲಾಗುವುದು.

ಜಂಟಿ ನಿರ್ದೇಶಕರು (ಎಟಿಎಸ್)
ತಾಂತ್ರಿಕ ಶಿಕ್ಷಣ ಇಲಾಖೆ
ಜಂಟಿ ನಿರ್ದೇಶಕರು (ಎ.ಟಿ.ಎಸ್.)
ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
26/4/19

ಇವರಿಗೆ:
ಎಲ್ಲಾ ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರು

ಪ್ರತಿ:
1. ಲೆಕ್ಕಾಧಿಕಾರಿಗಳು (ಬಿಲ್ಸ್), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
2. ಇಎಸ್‌ಟಿ 4(ಬಿ) ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು